ಅ.ದಾ. ಸಂಃ 51/2020 ಪಿ.ಡಬ್ಲ್ಯು: 01

ದಿನಾಂಕ: 30-07-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಃ ಶ್ರೀ ವಿ.ವಿ.ಕೆ ವಾದಿ ಪರ ವಕೀಲರಿಂದಃ

ದಿನಾಂಕ 25-02-2017 ರ ಕ್ರಯದ ಕರಾರು ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-1 ರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-1 ಎ ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-1 ರಲ್ಲಿ 1 ನೇ ಪ್ರತಿವಾದಿಯ ಹೆಬ್ಬೆಟ್ಟಿನ ಗುರುತು ಹಾಗೂ 2 ನೇ ಪ್ರತಿವಾದಿಯ ಸಹಿಯನ್ನು ನೋಡಿ ಗುರುತಿಸಿದ್ದು 2 ನೇ ಪ್ರತಿವಾದಿಯ ಸಹಿಯನ್ನು ನಿಪಿ-1 ಬಿ ಎಂದು ಗುರುತಿಸಲಾಯಿತು. ನಿಪಿ-1 ರ ಕರಾರು ಪತ್ರವನ್ನು ಜಮೀನಿಗೆ ಸಂಬಂಧಪಟ್ಟಂತೆ 1 ಮತ್ತು 2 ನೇ ಪ್ರತಿವಾದಿಗಳು ನನಗೆ ಬರೆದುಕೊಟ್ಟಿರುತ್ತಾರೆ.

ದಿನಾಂಕ 28-06-2019 ರ ತಿಳುವಳಿಕೆ ಪತ್ರದ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

3 ಅಂಚೆ ರಸೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-3 ರಿಂದ 5 ಎಂದು ಗುರುತಿಸಲಾಯಿತು.

ಒಂದು ಕಂದಾಯ ರಸೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯ ಹಾಗೂ ದಾಸ್ತಾವೇಜುಗಳನ್ನು ಪರಿಶೀಲಿಸಿ ನನ್ನ ದಾವೆಯನ್ನು ಪುರಸ್ಕರಿಸಿ ನನ್ನ ದಾವೆಯಲ್ಲಿ ಕೋರಿರುವಂತೆ ಡಿಕ್ರಿ ಮಾಡಬೇಕೆಂದು ಕೋರುತ್ತೇನೆ.

**(ಪಾಟೀ ಸವಾಲಿಗೆ ಪ್ರತಿವಾದಿಗಳ ಪರ ವಕೀಲರು ಕಾಲಾವಕಾಶ ಕೋರಿದ್ದು ನೀಡಲಾಯಿತು.)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ.ಸ. ಇದೆ

ಸಹಿ/-
ಪ್ರ.ಸಿ.ನ್ಯಾ ಮತ್ತು ಜೆಎಂಎಫ್‌ಸಿ,
ಗೌರಿಬಿದನೂರು